# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ:**11/10/2021** ರಂದು **ಬೆಳಿಗ್ಗೆ:11.00** ಗಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬೇಗೂರು ವಾರ್ಡ್ ಸಂಖ್ಯೆ-192 ರ ವಾರ್ಡ್ ಸಮಿತಿ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು ರವರ ಸಮ್ಮುಖದಲ್ಲಿ ಅವರ ಅಧ್ಯಕ್ಷತೆಯೊಂದಿಗೆ ಬೇಗೂರು ಉಪ-ವಿಭಾಗದ ಕಛೇರಿಯಲ್ಲಿ ವಾರ್ಡ್ ಸಮಿತಿ ಸಭೆಯನ್ನು ನಡೆಸಲಾಯಿತು.

ವಾರ್ಡ್ ಸಮಿತಿ ಕಾರ್ಯದರ್ಶಿ ಶ್ರೀ.ಚಲುವರಾಜು.ಎಸ್. ಕಿರಿಯ ಅಭಿಯಂತರರು, ವಾರ್ಡ್ ಸಂಖ್ಯೆ-192 ಬೇಗೂರು ರವರು ಸಭೆಗೆ ಹಾಜರಾಗಿದ್ದಂತಹ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು, ಹಾಗೂ ಇತರರನ್ನು ಸ್ವಾಗತಿಸಿ ಕಾರ್ಯಕ್ರಮ ಪ್ರಾರಂಭಿಸಿದರು.

**ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:**

1. ಕೋವಿಡ್ ವ್ಯಾಕ್ಸಿನ್ ಲಸಿಕೆಗಳನ್ನು ಹಾಕಿಸಿಕೊಳ್ಳಲು ಸಾರ್ವಜನಿಕರಿಗೆ ತಿಳುವಳಿಕೆ ಮೂಡಿಸುವ ಬಗ್ಗೆ.
2. ಕುಡಿಯುವ ನೀರು ಸರಬರಾಜು ಬಗ್ಗೆ,
3. ಘನತ್ಯಾಜ್ಯ ಬ್ಲಾಕ್‌ಸ್ಪಾಟ್‌ಗಳನ್ನು ತೆರವು ಮಾಡುವ ಬಗ್ಗೆ,
4. ವಾರ್ಡ್‌ನ ಸಾರ್ವಜನಿಕರ ಕುಂದುಕೊರತೆಗಳ ಬಗ್ಗೆ,
5. ಮಳೆಯಿಂದಾದ ಹಾನಿಗಳನ್ನು ಸರಿಪಡಿಸುವ ಬಗ್ಗೆ,

**ವಾರ್ಡ್ ನಂ-192 ವಾರ್ಡ್ ಸಮಿತಿ ಸಭೆಗೆ ಹಾಜರಾಗಲು ಸೂಚಿಸಿರುವವರ ವಿವರ**

| ಕ್ರ.ಸಂ | ಹೆಸರು | ಹುದ್ದೆ | ಹಾಜರಾತಿ |
|---|---|---|---|
| 1 | ಶ್ರೀ.ನೀಲಕಂಠಯ್ಯ.ಕೆ.ಪಿ. | ಅಧ್ಯಕ್ಷರು/ನೋಡೆಲ್ ಅಧಿಕಾರಿಗಳು | ಹಾಜರಾಗಿರುತ್ತಾರೆ |
| 2 | ಶ್ರೀ.ಚಲುವರಾಜು.ಎಸ್. | ಕಾರ್ಯದರ್ಶಿ (ಕಿ.ಅ.) | ಹಾಜರಾಗಿರುತ್ತಾರೆ |
| 3 | ಶ್ರೀ.ಶ್ರೀಧರ್.ಎಸ್. | ಹಿ.ಆ.ಪ | ಹಾಜರಾಗಿರುತ್ತಾರೆ |
| 4 | ಶ್ರೀ.ಆರ್.ಕುಮಾರ್ | ಬೆಸ್ಕಾಂ. ಸ.ಕಾ.ಅ. | ಹಾಜರಾಗಿರುತ್ತಾರೆ |
| 5 | ಶ್ರೀಮತಿ.ವಿನಯಕುಮಾರಿ | ಸ.ಕಾ.ಅ. ಬಿ.ಡಬ್ಲ್ಯೂ.ಎಸ್.ಎಸ್.ಬಿ | ಹಾಜರಾಗಿರುತ್ತಾರೆ |
| 6 | ಶ್ರೀ.ರಮೇಶ್ | ಸ.ಕಾ.ಅ. ಬೀದಿ ದೀಪ ಇಲಾಖೆ | ಹಾಜರಾಗಿರುತ್ತಾರೆ |
| 7 | ಶ್ರೀ.ಸಂತೋಷ್ ದೀಪು | ಅರಣ್ಯ | ಹಾಜರಾಗಿರುತ್ತಾರೆ |
| 8 | ಶ್ರೀ.ಮಂಜುನಾಥ್ | ಸರ್ಕಲ್ ಇನ್ಸ್‌ಪೆಕ್ಟರ್, ಬೇಗೂರು | ಗೈರುಹಾಜರು |
| 9 | ಶ್ರೀ.ಬಾಲಾಜಿ | ಸ.ಕಾ.ನಿ.ಅ. (ಎಸ್.ಡಬ್ಲ್ಯೂ.ಡಿ) | ಗೈರುಹಾಜರು |
| 10 | ಶ್ರೀ.ರಮೇಶ್ | ಸ.ಕಾ.ನಿ.ಅ. (ರ.ಮು.ಸೌ) | ಗೈರುಹಾಜರು |
| 11 | ಶ್ರೀ.ರಮೇಶ್.ಎಲ್. | ಕಿ.ಆ.ಪ. | ಹಾಜರಾಗಿರುತ್ತಾರೆ |
| 12 | ಶ್ರೀ.ರವಿ | ಬೀದಿ ದೀಪ ನಿರ್ವಹಣೆ | ಗೈರುಹಾಜರು |

| | | | |
|---|---|---|---|
| 13 | ಶ್ರೀ.ನರಸಪ್ಪ | ತೋಟಗಾರಿಕೆ ಇಲಾಖೆ | ಗೈರುಹಾಜರು |
| 14 | ಶ್ರೀ.ರಂಗಪ್ಪ ಸ.ಅ. | ಬಿ.ಡಬ್ಲ್ಯೂ.ಎಸ್.ಎಸ್.ಬಿ | ಗೈರುಹಾಜರು |
| 15 | ಶ್ರೀ.ಸ್ವಾಮಿ | ಗುತ್ತಿಗೆದಾರರು | ಹಾಜರಾಗಿರುತ್ತಾರೆ |
| 16 | ಶ್ರೀ.ಎಸ್.ಸಚಿನ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 17 | ಶ್ರೀ.ಮುರಳಿ | ಗುತ್ತಿಗೆದಾರರು | ಹಾಜರಾಗಿರುತ್ತಾರೆ |
| 18 | ಶ್ರೀ.ಗೋವಿಂದರಾಜು | ಗುತ್ತಿಗೆದಾರರು | ಹಾಜರಾಗಿರುತ್ತಾರೆ |
| 19 | ಶ್ರೀ.ಸುನಿಲ್ ಕುಮಾರ್.ಜೆ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 20 | ಶ್ರೀ.ಅರವಿಂದ | ಸಾರ್ವಜನಿಕರು ಅಭಿಯಂತರರು | ಹಾಜರಾಗಿರುತ್ತಾರೆ |
| 21 | ಶ್ರೀ.ವೇಣುಗೋಪಾಲ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 22 | ಶ್ರೀ.ಮಂಜುನಾಥ್.ಎನ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 23 | ಶ್ರೀ.ಆನಂದ್ ಕುಮಾರ್ | ಗುತ್ತಿಗೆದಾರರು | ಹಾಜರಾಗಿರುತ್ತಾರೆ |

## ಸಭೆಯ ನಡಾವಳಿಗಳು

1. ಕೋವಿಡ್-19 ಕರೋನಾ ರೋಗವು 3ನೇ ಹಂತದಲ್ಲಿ ಹರಡುತ್ತಿದ್ದು, ವಾರ್ಡ್ ವ್ಯಾಪ್ತಿಯಲ್ಲಿ 18 ವರ್ಷ ಮೇಲ್ಪಟ್ಟ ಸಾರ್ವಜನಿಕರು ಕೋವಿಡ್ ವ್ಯಾಕ್ಸಿನ್ ಚುಚುಮದ್ದು ನೀಡಲು ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳಿಗೆ ವಾರ್ಡ್ ಸಮಿತಿ ಸಭೆಯಲ್ಲಿ ನೋಡಲ್ ಅಧಿಕಾರಿಗಳು ಸೂಚಿಸಿದರು.

2. ಮಳೆಗಾಲವು ಮುಂದುವರೆದಿರುವುದರಿಂದ ತಾತ್ಕಾಲಿಕ ನಿಯಂತ್ರಣಾ ಕೊಠಡಿಯಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಬೇಕಾಗಿ ಸಹಾಯಕ ಅಭಿಯಂತರರು, ಬೇಗೂರು ರವರಿಗೆ ನೋಡಲ್ ಅಧಿಕಾರಿಗಳು ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದ್ದರು.

3. ವಾರ್ಡ್ ವ್ಯಾಪ್ತಿಯ ಎ.ಕೆ. ಕಾಲೋನಿಯಲ್ಲಿ ಕುಡಿಯುವ ನೀರು ಸರಬರಾಜು ಸಾಕಾಗುತ್ತಿಲ್ಲ, ಆದ್ದರಿಂದ ಇನ್ನು ಹೆಚ್ಚು ಟ್ಯಾಂಕರ್‌ಗಳಿಂದ ನೀರು ಸರಬರಾಜು ಮಾಡಬೇಕು. ಎಂದು ಸಾರ್ವಜನಿಕರು ದೂರಿದರು. ಅದಕ್ಕೆ ಸಂಬಂಧಿಸಿದಂತೆ ಕ್ರಮವಹಿಸಲು ನೋಡಲ್ ಅಧಿಕಾರಿಗಳು ಬಿ.ಬಿ.ಎಂ.ಪಿ ಸಹಾಯಕ ಅಭಿಯಂತರರಿಗೆ ಸೂಚನೆ ನೀಡಿದರು.

4. ವಾರ್ಡ್ ವ್ಯಾಪ್ತಿಯಲ್ಲಿ ಬಾರಿ ಮಳೆಯಿಂದಾಗಿ ಮಳೆಯ ನೀರು ರಸ್ತೆ ಬದಿಯ ಚರಂಡಿಗಳಲ್ಲಿ ಸರಾಗವಾಗಿ ಹರಿಯದೇ ರಸ್ತೆಯ ಮೇಲೆ ಮಳೆಯ ನೀರು ಹರಿದು ರಸ್ತೆ ಸಾರ್ವಜನಿಕರಿಗೆ ಮತ್ತು ವಾಹನ ಸವಾರರಿಗೆ ತುಂಬಾ ತೊಂದರೆಯಾಗುತ್ತಿರುತ್ತದೆ. ಸದರಿ ಸಮಸ್ಯೆಯನ್ನು ಅತೀ ಶೀಘ್ರವಾಗಿ ಬಗೆಹರಿಸಲು ನೋಡಲ್ ಅಧಿಕಾರಿಗಳು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ವಾರ್ಡ್ ಸಮಿತಿ ಸಭೆಯಲ್ಲಿ ತಿಳಿಸಿದರು.

5. ವಾರ್ಡ್ ವ್ಯಾಪ್ತಿಯಲ್ಲಿ ತುಂಬ ಕಂಬಳಿ ಹುಳುಗಳು ಹೆಚ್ಚಾಗಿದ್ದು, ಔಷಧಿ ಸಿಂಪಡಿಸಬೇಕೆಂದು ವಾರ್ಡ್ ಸಮಿತಿ ಸಭೆಯಲ್ಲಿ ಸಾರ್ವಜನಿಕರು ದೂರನ್ನು ತಿಳಿಸಿದರು. ಇದರ ಬಗ್ಗೆ ಈ ಕೂಡಲೇ ಕ್ರಮ ಕೈಗೊಳ್ಳಲು ನೋಡಲ್ ಅಧಿಕಾರಿಗಳು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚನೆ ನೀಡಿದರು.

6. ವಾರ್ಡ್ ವ್ಯಾಪ್ತಿಯಲ್ಲಿ ಹಂದಿ ಮತ್ತು ನಾಯಿಗಳ ಹಾವಳಿ ಹೆಚ್ಚಾಗಿದ್ದು, ಇದನ್ನು ನಿಯಂತ್ರಿಸಬೇಕೆಂದು ಸಾರ್ವಜನಿಕರು ದೂರನ್ನು ಸಲ್ಲಿಸಿದರು. ವಾರ್ಡ್ ಸಮಿತಿ ಸಭೆಯಲ್ಲಿ ತಿಳಿಸಿದರು. ನೋಡಲ್ ಅಧಿಕಾರಿಗಳು ಇದರ ಬಗ್ಗೆ ಕ್ರಮ ವಹಿಸಲು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಹಿಂದಿನ ಸಭೆಯಲ್ಲಿ ಸೂಚಿಸಿರುವುದರ ಬಗ್ಗೆ ವಿವರಣೆ ಕೇಳಿದರು.

7. ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ವ್ಯವಸ್ಥೆಯನ್ನು ಮಾಡಲು ವಾರ್ಡ್ ಸಮಿತಿ ಸಭೆಯಲ್ಲಿ ತಿಳಿಸಿದರು. ನೋಡಲ್ ಅಧಿಕಾರಿಗಳು ಇದರ ಬಗ್ಗೆ ಕ್ರಮ ವಹಿಸಲು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚನೆ ನೀಡಿದರು

8. ವಾರ್ಡ್ ವ್ಯಾಪ್ತಿಯಲ್ಲಿ ದೀಪಾವಳಿ ಹಬ್ಬದ ಸಲುವಾಗಿ ಸ್ವಚ್ಛತೆಯ ಬಗ್ಗೆ ಗಮನಹರಿಸಿಕೊಡಬೇಕೆಂದು ವಾರ್ಡ್ ಸಮಿತಿ ಸಭೆಯಲ್ಲಿ ತಿಳಿಸಿದರು. ನೋಡಲ್ ಅಧಿಕಾರಿಗಳು ಇದರ ಬಗ್ಗೆ ಕ್ರಮವಹಿಸಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚನೆ ನೀಡಿದರು

9. ವಾರ್ಡ್ ವ್ಯಾಪ್ತಿಯಲ್ಲಿ ದೀಪಾವಳಿ ಹಬ್ಬದ ಸಲುವಾಗಿ ರಸ್ತೆಯ ಇಕ್ಕೆಲಗಳಲ್ಲಿ ಪ್ರತಿದಿನ ಆಟೋ ಟಿಪ್ಪರ್ ಬಳಸಿ ಘನತ್ಯಾಜ್ಯ ನಿರ್ವಹಣೆ ಮಾಡಲು ವಾರ್ಡ್ ಸಮಿತಿ ಸಭೆಯಲ್ಲಿ ತಿಳಿಸಿದರು. ನೋಡಲ್ ಅಧಿಕಾರಿಗಳು ಇದರ ಬಗ್ಗೆ ಕ್ರಮ ವಹಿಸಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚನೆ ನೀಡಿದರು

**ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.**

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ನಂ -192 ಬೇಗೂರು

ಅಧ್ಯಕ್ಷರು
ವಾರ್ಡ್ ಕಮಿಟಿ ಅಧ್ಯಕ್ಷರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ವಾರ್ಡ್ ನಂ-192, ಬೇಗೂರು

**ಪ್ರತಿಗಳು:-**

1) ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ,
2) ಉಪ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ,
3) ಸಹಾಯಕ ಕಂದಾಯ ಅಧಿಕಾರಿ (ಬೇಗೂರು) ಉಪವಿಭಾಗ ರವರ ಅವಗಾಹನೆಗೆ,
4) ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿ ರವರ ಅವಗಾಹನೆಗೆ,
5) ಕಛೇರಿ ಕಡತಕ್ಕೆ